# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 532(634) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 22.07.2024 |

| ಕ್ರಮ. ಸಂಖ್ಯೆ. | ಪ್ರಶ್ನೆ | ಉತ್ತರ |
|---|---|---|
| (ಅ) | ಬಾಗಲಕೋಟೆ ಜಿಲ್ಲೆಯ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ನೂತನ ವಿಶ್ವ ವಿಶ್ವವಿದ್ಯಾಲಯದೊಂದಿಗೆ ವಿಜಯಪುರ ಜಿಲ್ಲೆಯ ಪದವಿ ಕಾಲೇಜುಗಳನ್ನು ಸಂಯೋಜನೆಗೊಳಪಡಿಸುವ ಚಿಂತನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಸಂಯೋಜನೆಗೆ ಒಳಪಡಿಸಲಾಗುವುದು; (ವಿವರ ನೀಡುವುದು) | ಬಾಗಲಕೋಟೆ ಜಿಲ್ಲೆಯ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ನೂತನ ವಿಶ್ವ ವಿಶ್ವವಿದ್ಯಾಲಯದೊಂದಿಗೆ ವಿಜಯಪುರ ಜಿಲ್ಲೆಯ ಪದವಿ ಕಾಲೇಜುಗಳನ್ನು ಸಂಯೋಜನೆಗೊಳಪಡಿಸುವ ಚಿಂತನೆಯನ್ನು ಸರ್ಕಾರವು ಹೊಂದಿರುವುದಿಲ್ಲ. |
| (ಆ) | ವಿಜಯಪುರ ಜಿಲ್ಲೆಯಲ್ಲಿ ಪದವಿ ಕಾಲೇಜುಗಳನ್ನು ಹತ್ತಿರದ ಬಾಗಲಕೋಟೆ ಜಿಲ್ಲೆ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ನೂತನ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಳಿಸದೆ, ದೂರದ (300 ಕೀ.ಮೀ) ಬೆಳಗಾವಿಗೆ ಸಂಯೋಜನೆಗೊಳಿಸಲು ಕಾರಣಗಳೇನು; | ಜಾಗತಿಕ ಮಟ್ಟದಲ್ಲಿ ಕಂಡುಬಂದಿರುವ ತೀವ್ರತರನಾದ ಬದಲಾವಣೆಗಳ ಸವಾಲುಗಳನ್ನು ಎದುರಿಸುವ ಸಲುವಾಗಿ ಕಲಿಕೆಯ ಫಲಪ್ರದತಯನ್ನು ವೃದ್ಧಿಸುವ ಮತ್ತು ರಾಜ್ಯದಲ್ಲಿ ಶೈಕ್ಷಣಿವಾಗಿ ಹಿಂದುಳಿದಿರುವ ಜಿಲ್ಲೆಗಳಲ್ಲಿ ಶೈಕ್ಷಣಿಕ ಸುಧಾರಣೆ ತರುವ ಹಾಗೂ ರಾಜ್ಯದ ಉನ್ನತ ಶಿಕ್ಷಣ ಸಂಸ್ಥೆಗಳ ಪ್ರದೇಶವಾರು ಹಂಚಿಕೆಯಲ್ಲಿ ಉಂಟಾಗಿರುವ ಅಸಮತೋಲನವನ್ನು ಸರಿಪಡಿಸುವ ಉದ್ದೇಶದಿಂದ ಬಾಗಲಕೋಟೆ ಜಿಲ್ಲೆಯೂ ಸೇರಿದಂತೆ ಏಳು ಜಿಲ್ಲೆಗಳಲ್ಲಿ, ಜಿಲ್ಲಾ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೆ ಸೀಮಿತಗೊಳಿಸಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿದೆ.<br><br>ವಿಜಯಪುರ ಜಿಲ್ಲೆಗಳ ಮೇಲೆ ಪ್ರಾದೇಶಿಕ ಅಧಿಕಾರ ಕ್ಷೇತ್ರ ವ್ಯಾಪ್ತಿಯನ್ನು ಹೊಂದಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಸುಸಜ್ಜಿತ ಆಡಳಿತ ವ್ಯವಸ್ಥೆ ಹಾಗೂ ಸಂಪನ್ಮೂಲ ಹೊಂದಿರುವ ವಿಶ್ವವಿದ್ಯಾಲಯವಾಗಿರುತ್ತದೆ. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕೇಂದ್ರ ಸ್ಥಾನವಾಗಿರುವ ಬೆಳಗಾವಿಯಿಂದ ದೂರದಲ್ಲಿರುವ |

| | | |
|---|---|---|
| | | ವಿಜಯಪುರ ಜಿಲ್ಲೆ ಹಾಗೂ ತಾಲ್ಲೂಕುಗಳ ವಿದ್ಯಾರ್ಥಿಗಳ ಶೈಕ್ಷಣಿಕ ಒತ್ತಾಸೆಯನ್ನು ವಿಜಯಪುರ ತೊರವಿಯಲ್ಲಿರುವ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವು ಸಮರ್ಪಕವಾಗಿ ಈಡೇರಿಸುತ್ತದೆ.<br><br>ವಿಜಯಪುರ ಜಿಲ್ಲೆಯ ವಿದ್ಯಾರ್ಥಿಗಳ ಹಾಗೂ ಕಾಲೇಜುಗಳ ಹಿತಾಸಕ್ತಿಗೆ ಧಕ್ಕೆಯಾಗದಂತೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಿಂದ ಕ್ರಮವಹಿಸಲಾಗುತ್ತಿದೆ. |
| (ಇ) | ಗಡಿ ಭಾಗದ ಬಡ ವಿದ್ಯಾರ್ಥಿಗಳು ಪದವಿ ಮತ್ತು ಸ್ನಾತ್ತಕೋತ್ತರ ಪದವಿಗಳಿಗೆ ಸಂಬಂಧಿಸಿದ ಯಾವುದೇ ಪ್ರಮಾಣ ಪತ್ರಗಳನ್ನು ಪಡೆಯಬೇಕೆಂದರೆ ದೂರದ ಬೆಳಗಾವಿಗೆ ಹೋಗಿ ಬರಬೇಕಾದ ಪರಿಸ್ಥಿತಿ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು; ಕಾಲೇಜಿನ ಎಲ್ಲಾ ನೌಕರರು ಮತ್ತು ಕಾಲೇಜಿನ ಆಡಳಿತ ಮಂಡಳಿಯವರಿಗೂ ಸಹ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು;<br><br>ವಿಜಯಪೂರ ಜಿಲ್ಲೆಯಲ್ಲಿನ ಪದವಿ ಕಾಲೇಜುಗಳನ್ನು ಹತ್ತಿರದ ಬಾಗಲಕೋಟೆ ಜಿಲ್ಲೆ ಜಮಖಂಡಿಯಲ್ಲಿ ಪ್ರಾರಂಭವಾಗಿರುವ ನೂತನ ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಳಿಸಿದ್ದಲ್ಲಿ ಪದವಿ ಮತ್ತು ಸ್ನಾತ್ತಕೋತ್ತರ ವಿದ್ಯಾರ್ಥಿಗಳ ಕಾಲೇಜಿನ ಎಲ್ಲಾ ನೌಕರರಿಗೆ ಮತ್ತು ಕಾಲೇಜಿನ ಆಡಳಿತ ಮಂಡಳಿಯವರಿಗೆ ಅನುಕೂಲ ಮಾಡಿದಂತಾಗುವುದಿಲ್ಲವೆ; ಈ ನಿಟ್ಟಿನಲ್ಲಿ ಸರ್ಕಾರವು ಚಿಂತನೆ ನಡೆಸಿದೆಯೇ? | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

**ಸಂಖ್ಯೆ: ಇಡಿ/ 303 /ಯುಆರ್ ಸಿ /2024**

**(ಡಾ|| ಎಂ.ಸಿ. ಸುಧಾಕರ್)**
ಸಚಿವರು, ಉನ್ನತ ಶಿಕ್ಷಣ ಇಲಾಖೆ.

ಡಾ.ಎಂ.ಸಿ ಸುಧಾಕರ್
ಉನ್ನತ ಶಿಕ್ಷಣ ಸಚಿವರು